**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1235/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಸಚಿನ್ | ಫ್ರಾಸಾ-2 |
| ತಂದೆಯ ಹೆಸರು | : ಸುಬ್ಬರಾಯ | ಚಾಸಾ-9 |
| ವಯಸ್ಸು | : 30 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯಾಪಾರ | ದಿನಾಂಕಃ 18.07.2026 |
| ವಾಸಸ್ಥಳ | : ಮರ್ಕಲ್, ಮೂಡಿಗೆರೆ | |

**:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

1. ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ.

2. ಸಾಕ್ಷಿಯು ನಿಪಿ-5 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-6 ರಿಂದ 9 ರ ಪೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು.

3. 1 ವರ್ಷದ ಹಿಂದೆ ನಾನು ಮತ್ತು ಚಾಸಾ-10 ರವರು ಬಾಳೂರು ಪೋಲಿಸ್ ಠಾಣೆಯ ಆವರಣದಲ್ಲಿ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಪೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಪೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

1. ಸಾಕ್ಷಿಗೆ ನಿಪಿ-5 ರ ಸಂಪೂರ್ಣ ವಿಚಾರವನ್ನು ಓದಿ ಹೇಳಲಾಗಿ ಅವರು ಅದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ. ಈಗ ಓದಿ ಹೇಳಿದಂತೆ ದಿ.02.05.2024 ರಂದು ಬಾಳೂರು ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-15 ಎಂದು ಗುರುತಿಸಲಾಯಿತು.

2. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.